# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಕೆ.ಎಸ್ ಭಟ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ, ಕೋಲಾರ ಜಿಲ್ಲೆ ಪ್ರಸ್ತುತ ನಿವೃತ್ತ ಇವರ ವಿರುದ್ಧದ ಶಿಸ್ತು ಕ್ರಮದ ಬಗ್ಗೆ–ಅಂತಿಮ ಆದೇಶ.

**ಓದಲಾಗಿದೆ:**
1. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 534 ಉಖಾಯೋ 2014, ದಿನಾಂಕ: 27.11.2015.
2. ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ: ಗ್ರಾಅಪ 313 ವಿಸೇಬಿ 2015, ದಿನಾಂಕ: 11.06.2019.

*****

**ಪ್ರಸ್ತಾವನೆ:–**

ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯನ್ನು ಸಲ್ಲಿಸಿ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನದ ಸಂಬಂಧ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ನರೇಗಾ ಯೋಜನೆಯ ಕಾರ್ಯಕ್ರಮಾಧಿಕಾರಿಯನ್ನಾಗಿ ನರೇಗಾ ಅಧಿನಿಯಮ–2005 ರನ್ವಯ ನೇಮಿಸಲಾಗಿತ್ತು. ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರತಿ ತಿಂಗಳು ಕನಿಷ್ಟ 10 ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ, ಭೇಟಿಯ ಟಿಪ್ಪಣಿಯನ್ನು ಕಡ್ಡಾಯವಾಗಿ ನೀಡಬೇಕೆಂದು ದಿನಾಂಕ: 11.06.2014 ರಂದು ನಡೆದ ಆರ್.ಎಫ್.ಡಿ ಸಭೆಯಲ್ಲಿ ಕೋಲಾರ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸೂಚಿಸಿದ್ದರೂ, **ಶ್ರೀ ಕೆ.ಎಸ್.ಭಟ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ, ಕೋಲಾರ ಜಿಲ್ಲೆ** ಇವರು ಜನವರಿ 2014 ರಿಂದ ಮೇ 2015ರ ಮಾಹೆಯಲ್ಲಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿರುವ ಬಗ್ಗೆ ಭೇಟಿ ನೀಡಿ ಟಿಪ್ಪಣಿ ಸಲ್ಲಿಸದೇ ಇರುವ ಮತ್ತು ಈ ಸಂಬಂಧ ನೋಟಿಸನ್ನು ಜಾರಿ ಮಾಡಿದ್ದರೂ ಸಹ ಉತ್ತರವನ್ನು ನೀಡದೇ ಅನುಪಾಲನಾ ಕ್ರಮ ವಹಿಸುವಲ್ಲಿ, ಮೇಲಾಧಿಕಾರಿಗಳ ಸೂಚನೆಗಳನ್ನು ಪಾಲಿಸದೇ ಜವಾಬ್ದಾರಿಯನ್ನು ನಿರ್ವಹಿಸುವಲ್ಲಿ ಸಂಪೂರ್ಣ ವಿಫಲರಾಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳುವಂತೆ ಕೋರಿದ್ದರು.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆಪಾದಿತ ಅಧಿಕಾರಿಯವರು ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 12 (1)(ಎ) ರಡಿ ದೋಷಾರೋಪಣಾ ಪಟ್ಟಿಯೊಂದಿಗೆ ಮೇಲೆ ಕ್ರಸಂ (2)ರಲ್ಲಿ ಓದಲಾದ ದಿನಾಂಕ: 11.06.2019ರ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಿ, ಸಮಜಾಯಿಷಿ ಏನಾದರೂ ಇದ್ದಲ್ಲಿ ಲಿಖಿತ ಮೂಲಕ ಸಲ್ಲಿಸುವಂತೆ ಸೂಚಿಸಲಾಗಿತ್ತು.

..2

ಸದರಿ ಆರೋಪಿತರು ಮೂಲತಃ ಅರಣ್ಯ ಇಲಾಖೆಯ ಅಧಿಕಾರಿಯಾಗಿದ್ದು, ಸದರಿಯವರಿಗೆ ಸರ್ಕಾರದ ದಿನಾಂಕ: 11.06.2019ರ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಿ ಸ್ವೀಕೃತಿಯನ್ನು ಕಳುಹಿಸುವಂತೆ ಮತ್ತು ಸದರಿ ಅಧಿಕಾರಿಯ ಸೇವಾ ವಿವರಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಒದಗಿಸುವಂತೆ ಅರಣ್ಯ ಇಲಾಖೆಯನ್ನು ಹಲವು ಅನಧಿಕೃತ ಟಿಪ್ಪಣಿ ಹಾಗೂ ನೆನಪೋಲೆ ಪತ್ರಗಳ ಮುಖಾಂತರ ಕೋರಲಾಗಿದ್ದು, ಮಾಹಿತಿಯು ಈವರೆಗೂ ಸ್ವೀಕೃತವಾಗಿರುವುದಿಲ್ಲ.

ಏತನ್ಮಧ್ಯೆ, ಶ್ರೀ ಕೆ.ಎಸ್.ಭಟ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ಇವರು ಅರಣ್ಯ ಇಲಾಖೆಯ ವನ್ಯಜೀವಿ ಸಂರಕ್ಷಣಾಧಿಕಾರಿ, ಶಿವಮೊಗ್ಗ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ದಿನಾಂಕ:30.06.2019ರಂದು ಸೇವೆಯಿಂದ ವಯೋನಿವೃತ್ತಿ ಹೊಂದಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪರಿಶೀಲಿಸಲಾಗಿ, ಆಪಾದಿತ ಅಧಿಕಾರಿಯವರ ವಿರುದ್ಧದ ಆರೋಪಗಳು ಜನವರಿ-2014 ರಿಂದ ಮೇ-2015ರ ಮಾಹೆಯಲ್ಲಿ ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಟಿಪ್ಪಣಿ ಸಲ್ಲಿಸದೇ ಇರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದ ಸಾಮಾನ್ಯ ಸ್ವರೂಪದ ಆರೋಪಗಳಾಗಿರುತ್ತವೆ. ಪ್ರಕರಣದಲ್ಲಿ ಯಾವುದೇ ಆರ್ಥಿಕ ನಷ್ಟ/ ಸರ್ಕಾರದ ಹಣ ದುರುಪಯೋಗ/ ಅಧಿಕಾರ ದುರ್ಬಳಕೆಯ ಅಂಶಗಳು ಇಲ್ಲದಿರುವುದನ್ನು ಪರಿಗಣಿಸಿ, ಸದರಿಯವರ ವಿರುದ್ಧದ ಇಲಾಖಾ ವಿಚಾರಣೆಯ ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 313 ವಿಸೇಬಿ 2015, ಬೆಂಗಳೂರು, ದಿನಾಂಕ:28.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ.ಎಸ್ ಭಟ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ, ಕೋಲಾರ ಜಿಲ್ಲೆ ಪ್ರಸ್ತುತ ನಿವೃತ್ತ ಇವರನ್ನು ಕರ್ನಾಟಕ ನಾಗರೀಕ ಸೇವಾ (ವ,ನಿ&ಮೇ) ನಿಯಮ-1957ರ ನಿಯಮ-12(1)(ಎ) ರಡಿ ದಿನಾಂಕ: 11.06.2019ರಂದು ಸರ್ಕಾರದಿಂದ ಜಾರಿಗೊಳಿಸಿದ ದೋಷಾರೋಪಣಾ ಪಟ್ಟಿಯಲ್ಲಿನ ಆರೋಪಗಳಿಂದ **ಆರೋಪಮುಕ್ತ**ಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಾಲಪ್ಪ) 28/03/2022
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

28/03/2022

**ಇವರಿಗೆ,**

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.

3) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಬೆಂಗಳೂರು-09.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಜಿಲ್ಲೆ.
5) ಆಪಾದಿತ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಜಿಲ್ಲೆ ಇವರ ಮುಖಾಂತರ).
6) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
7) ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

*****